# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 456

ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 19.07.2024

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ 2579 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳು ಮಂಜೂರಾಗಿ ಆ ವೃಂದದಲ್ಲಿ ನೌಕರರು ಕರ್ತವ್ಯ ನಿರ್ವಹಿಸುತ್ತಿರುವುದರಿಂದ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಗಳಲ್ಲಿ ಮಂಜೂರಾಗಿರುವ ಪ್ರಥಮ ದರ್ಜೆ ಲೆಕ್ಕ ಸಹಾಯಕ ಮತ್ತು ಲೆಕ್ಕಾಧೀಕ್ಷಕರ ಹುದ್ದೆಗಳನ್ನು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವೃಂದದಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ಕರ್ನಾಟಕ ರಾಜ್ಯ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ ವೃಂದ ಮತ್ತು ನೇಮಕಾತಿ) ನಿಯಮಗಳು, 2020ಕ್ಕೆ ತಿದ್ದುಪಡಿ ತರಲು ಕ್ರಮ ವಹಿಸುವಂತೆ' ದಿನಾಂಕ 19.08.2022 ರಂದು ಅಪರ ಮುಖ್ಯ ಕಾರ್ಯರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಜರುಗಿದ ಸಭಾ ನಡವಳಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳೇನು; (ವಿವರಗಳನ್ನು ಒದಗಿಸುವುದು) | ಹಾಲಿ ಇರುವ ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ) (ವೃಂದ ಮತ್ತು ನೇಮಕಾತಿ) ನಿಯಮಗಳು 2020 ರಲ್ಲಿ ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್‌ಗಳ ವೃಂದ ಬಲದಲ್ಲಿ ಬರುವ ಲೆಕ್ಕ ವಿಭಾಗದ ಹುದ್ದೆಗಳಿಗೆ ಪೂರ್ಣ ಪ್ರಮಾಣದಲ್ಲಿ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆಯಿಂದ ನಿಯೋಜನೆ ಮೇಲೆ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ದಿನಾಂಕ:19.8.2022 ರಂದು ಹಿಂದಿನ ಅಪರ ಮುಖ್ಯ ಕಾರ್ಯದರ್ಶಿಯವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಗ್ರಾಮ ಪಂಚಾಯತಿಗಳಿಗೆ 2579 ದ್ವಿತಿಯ ದರ್ಜೆ ಸಹಾಯಕರ ಹುದ್ದೆಗಳು ಮಂಜೂರಾಗಿ ಆ ವೃಂದದಲ್ಲಿ ನೌಕರರ ಕರ್ತವ್ಯ ನಿರ್ವಹಿಸುತ್ತಿರುವುದರಿಂದ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳಲ್ಲಿ ಮಂಜೂರಾಗಿರುವ ಪ್ರಥಮ ದರ್ಜೆ ಲೆಕ್ಕ ಸಹಾಯಕ ಮತ್ತು ಲೆಕ್ಕಾಧೀಕ್ಷಕರ ಹುದ್ದೆಗಳನ್ನು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವೃಂದದಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ) (ವೃಂದ ಮತ್ತು ನೇಮಕಾತಿ) ನಿಯಮಗಳು 2020 ಕ್ಕೆ ತಿದ್ದುಪಡಿ ತರಲು ಸೂಚಿಸಲಾಗಿದೆ.<br><br>ದಿನಾಂಕ:28.10.2022 ರಂದು ಆರ್ಥಿಕ ಇಲಾಖೆಯು ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯದ ಕಡತದಲ್ಲಿ ಅಭಿಪ್ರಾಯ ನೀಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಸಹಾಯಕ ಲೆಕ್ಕಾಧಿಕಾರಿ ಮತ್ತು ಲೆಕ್ಕಾಧಿಕ್ಷಕ ಮತ್ತು ಪ್ರಥಮ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳನ್ನು ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ ಹಾಗೂ ಖಜಾನೆ ಇಲಾಖೆಗಳಿಂದ 70:30 ಅನುಪಾತದಲ್ಲಿ ನಿಯೋಜನೆ ಮೇಲೆ ಭರ್ತಿ ಮಾಡಲು ಸಹಮತಿ ನೀಡಿತ್ತು. |

| | | |
|---|---|---|
| | | ಹಿಂದಿನ ಅಪರ ಮುಖ್ಯ ಕಾರ್ಯದರ್ಶಿಯವರು ದಿನಾಂಕ:19.8.2022ರ ಸಭೆಯಲ್ಲಿ ನೀಡಿದ್ದ ಸೂಚನೆ ಹಾಗೂ ಆರ್ಥಿಕ ಇಲಾಖೆಯು ನೀಡಿದ್ದ ಸಹಮತಿಯನ್ನು ಅನುಸರಿಸಿ, ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ ವೃಂದ ಮತ್ತು ನೇಮಕಾತಿ) ನಿಯಮಗಳು 2020ಕ್ಕೆ ಸೂಕ್ತ ತಿದ್ದುಪಡಿ ತರುವ ದಿಸೆಯಲ್ಲಿ ಪರಿಶೀಲಿಸುವ ಸಂದರ್ಭದಲ್ಲಿ ಆರ್ಥಿಕ ಇಲಾಖೆಯ ಸಂಖ್ಯೆ:ಆಇ 216 ರಾಲೆಪ 2023, ದಿನಾಂಕ:15.9.2023ರಂದು ಹೊರಡಿಸಿರುವ ಆದೇಶದಲ್ಲಿ ಇಲಾಖೆಯಲ್ಲಿ ಮಂಜೂರಾಗಿರುವ ಲೆಕ್ಕ ವಿಭಾಗದ ಗ್ರೂಪ್-ಎ ಮತ್ತು ಬಿ ವೃಂದದ ಹುದ್ದೆಗಳನ್ನು ಸಂಪೂರ್ಣವಾಗಿ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆಯಿಂದಲೇ ಭರ್ತಿ ಮಾಡಲು ತಿಳಿಸಿರುತ್ತದೆ.<br><br>ಈ ಕಾರಣದಿಂದ ಅಪರ ಮುಖ್ಯ ಕಾರ್ಯದರ್ಶಿಯವರು ಸಭೆಯಲ್ಲಿ ಕೈಗೊಂಡ ನಿರ್ಣಯಗಳನ್ನಾಗಲಿ, ಆರ್ಥಿಕ ಇಲಾಖೆಯು ನೀಡಿದ ಸಹಮತಿಯನ್ನು ಯಥಾವತ್ತಾಗಿ ಅನ್ವಯಿಸಿಕೊಳ್ಳಲು ಸಾಧ್ಯವಾಗುವುದಿಲ್ಲ.<br><br>ಈ ಇಲಾಖೆಯಲ್ಲಿ ಸಮಗ್ರ ವೃಂದ ಮತ್ತು ನೇಮಕಾತಿ ನಿಯಮಗಳ ಕರಡನ್ನು ರಚಿಸುವ ಉದ್ದೇಶಕ್ಕೆ, ದಿನಾಂಕ:12.01.2024ರ ಆದೇಶದಲ್ಲಿ ವಿಶೇಷ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಅಂತರಿಕ ವೃಂದ ಮತ್ತು ನೇಮಕಾತಿ ನಿಯಮಗಳ ರಚನಾ ಸಮಿತಿ ರಚಿಸಿದ್ದು, ಸದರಿ ಸಮಿತಿಯ ಮುಂದೆ ಹಿಂದಿನ ಅಪರ ಮುಖ್ಯ ಕಾರ್ಯದರ್ಶಿಯವರು ದಿನಾಂಕ:19.8.2022ರ ಸಭೆಯಲ್ಲಿ ನೀಡಿದ್ದ ಸೂಚನೆ ಕುರಿತು ಅಂತಿಮ ನಿರ್ಣಯಕ್ಕೆ ಬಾಕಿ ಇರುತ್ತದೆ. |
| (ಆ) | ಜಿಲ್ಲಾ ಪಂಚಾಯಿತಿ/ ತಾಲ್ಲೂಕು ಪಂಚಾಯಿತಿಯ ಲೆಕ್ಕ ವಿಭಾಗದಲ್ಲಿ ಹಾಗೂ ಅಧೀನದಲ್ಲಿ ಬರುವ 28 ಇಲಾಖೆಗಳಲ್ಲಿ ಇರುವ ಪ್ರಥಮ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳಿಗೆ ಶೇ. 50ರ ಅನುಪಾತದಂತೆ ಗ್ರಾಮ ಪಂಚಾಯಿತಿಗಳಲ್ಲಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರಾಗಿ ಕರ್ತವ್ಯ ನಿರ್ವಹಿಸುತ್ತಿರುವವರನ್ನು ಪ್ರಥಮ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳಿಗೆ ಮುಂಬಡ್ತಿಗೆ ಪರಿಗಣಿಸಬಾರದೇಕೆ; ಈ ನಿಟ್ಟಿನಲ್ಲಿ ಆಗಿರುವ ಕ್ರಮಗಳೇನು; | ಮೇಲಿನಂತೆ |

| | | |
|---|---|---|
| (ಇ) | ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೂ ಲೆಕ್ಕ ಸಹಾಯಕ ಹುದ್ದೆಯನ್ನು ಸೃಜಿಸಿ ಗ್ರೇಡ್-2 ಗ್ರಾಮ ಪಂಚಾಯಿತಿಗಳಿಗೆ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಯನ್ನು ಹಾಗೂ ಗ್ರೇಡ್-1 ಗ್ರಾಮ ಪಂಚಾಯಿತಿಗಳಿಗೆ ಪ್ರಥಮ ದರ್ಜೆ ಲೆಕ್ಕ ಸಹಾಯಕ ಹುದ್ದೆಯನ್ನು ಸೃಜಿಸುವ ಪ್ರಸ್ತಾವನೆ ಸರ್ಕಾರದ ಯಾವ ಹಂತದಲ್ಲಿದೆ? (ವಿವರಗಳನ್ನು ನೀಡುವುದು) | ಸರ್ಕಾರದ ಪರಿಶೀಲನೆಯಲ್ಲಿದೆ. |

ಸಂಖ್ಯೆ: ಗ್ರಾಅಪ 318 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.